**Akashvani : Bangalore**
**Regional Bulletin In Kannada**
**02.02.2026 / 18.40 hrs**
**ಆಕಾಶವಾಣಿ ಬೆಂಗಳೂರು**
**ಪ್ರದೇಶ ಸಮಾಚಾರ**
**02.02.2026 / 18.40 hrs**
*********************

ಮುಖ್ಯಾಂಶಗಳು

೧. ೧೫ನೇ ಹಣಕಾಸು ಆಯೋಗದಿಂದ ರಾಜ್ಯಕ್ಕೆ ೧ಲಕ್ಷ ೨೫ ಸಾವಿರ ಕೋಟಿ ರೂಪಾಯಿ ನಷ್ಟ- ವಿಧಾನಸಭೆಯಲ್ಲಿ ಮುಖ್ಯಮಂತ್ರಿ ಸ್ಪಷ್ಟನೆ

೨. ರಾಜ್ಯದ ರೈಲ್ವೆ, ಮೂಲಸೌಕರ್ಯ ಅಭಿವೃದ್ಧಿ ಯೋಜನೆಗಳಿಗೆ ಬಜೆಟ್‌ನಲ್ಲಿ ೭ ಸಾವಿರದ ೭೪೮ ಕೋಟಿ ರೂಪಾಯಿ ಅನುದಾನ - ಕೇಂದ್ರ ಸಚಿವ ಅಶ್ವಿನಿ ವೈಷ್ಣವ್

೩. ರಾಜ್ಯಕ್ಕೆ ೬೩ ಸಾವಿರದ ೪೯ ಕೋಟಿ ರೂಪಾಯಿ ತೆರಿಗೆ ಹಂಚಿಕೆ- ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಸಮರ್ಥನೆ

೪. ಬೆಳಗಾವಿ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ಎರಡನೇ ಭಾಗದ ವಾರ್ಷಿಕ ಘಟಿಕೋತ್ಸವ; ರಾಜ್ಯಪಾಲರಿಂದ ಚಿನ್ನದ ಪದಕ ಪ್ರದಾನ

೫. ೧೭ನೇ ಅಂತಾರಾಷ್ಟ್ರೀಯ ಚಲನಚಿತ್ರೋತ್ಸವ; ಒಟಿಟಿಯ ಮಹತ್ವ ಪ್ರತಿಪಾದಿಸಿದ ಗಿರೀಶ್ ಕಾಸರವಳ್ಳಿ

*****************

ವಿಧಾನಸಭೆಯಲ್ಲಿಂದು ಭೋಜನ ವಿರಾಮದ ಬಳಿಕ ರಾಜ್ಯಪಾಲರ ಭಾಷಣದ ವಂದನಾ ನಿರ್ಣಯದ ಮೇಲೆ ನಡೆದ ಚರ್ಚೆಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಉತ್ತರಿಸಿದರು.

ರಾಜ್ಯಪಾಲರು ಜಂಟಿ ಸದನದಲ್ಲಿ ಪೂರ್ಣ ಭಾಷಣ ಓದಲಿಲ್ಲ. ರಾಷ್ಟ್ರಗೀತೆಗೂ ನಿಲ್ಲದೆ ಆತುರಾತುರವಾಗಿ ನಿರ್ಗಮಿಸಿದರು ಎಂದು ಅಸಮಾಧಾನ ವ್ಯಕ್ತಪಡಿಸಿದರು.

ಬಿಜೆಪಿಯ ಸುನೀಲ್ ಕುಮಾರ್ ಅವರು ಸಂವೇದನಾ ರಹಿತ ಸರ್ಕಾರ, ಅಸಹಾಯಕ ಮುಖ್ಯಮಂತ್ರಿ ಎಂದು ಹೇಳಿದ್ದು, ಒಮ್ಮೊಮ್ಮೆ ಅಸಾಹಯಕ ವಾಗಬೇಕಾಗುತ್ತದೆ ಸುಳ್ಳಿನ ಎದುರು ಸತ್ಯವೂ ಅಸಾಹಯಕವಾಗುತ್ತದೆ ಎಂದು ಪ್ರತಿಪಕ್ಷಗಳಿಗೆ ತಿರುಗೇಟು ನೀಡಿದರು.

ಹೊಸ ಸರ್ಕಾರ ಬಂದಾಗ ಹೊಸ ಅಧಿವೇಶನ ಆರಂಭವಾದಾಗ, ಇಲ್ಲವೇ ವರ್ಷದ ಮೊದಲ ಅಧಿವೇಶನದ ವೇಳೆ ಜಂಟಿ ಅಧಿವೇಶನ ಮಾಡಲಾಗುತ್ತದೆ ಎಂದು ಮುಖ್ಯಮಂತ್ರಿ ರಾಜ್ಯಪಾಲರ ಭಾಷಣದ ಮಹತ್ವವನ್ನು ಸದನಕ್ಕೆ ವಿವರಿಸಿದರು.

೧೫ ನೇ ಹಣಕಾಸು ಆಯೋಗದಿಂದ ರಾಜ್ಯಕ್ಕೆ ೫ ವರ್ಷದಲ್ಲಿ ೧ಲಕ್ಷ ೨೫ ಸಾವಿರ ಕೋಟಿ ರೂಪಾಯಿ ನಷ್ಟವಾಗಿದೆ ಎಂದು ತಿಳಿಸಿದರು. ಜಿ ಎಸ್ ಟಿ ಯಿಂದ ೨೦೨೦ರಿಂದ ೨೦೨೫ರವರೆಗೆ ೨ ಲಕ್ಷ ಕೋಟಿ ರೂಪಾಯಿ ನಷ್ಟವಾಗಿದೆ ಎಂದು ಹೇಳಿದರು.

ರಾಜ್ಯದಲ್ಲಿ ಅಕ್ರಮವಾಗಿ ನೆಲೆಸಿರುವ ಬಾಂಗ್ಲಾ ದೇಶೀಯರಿಗೆ ಯಾವುದೇ ಕಾರಣಕ್ಕೂ ಮನೆಗಳನ್ನು ನೀಡುವುದಿಲ್ಲ. ಅವರನ್ನು ರಾಜ್ಯದಿಂದ ಹೊರಗೆ ಕಳಿಸಲಾಗುವುದು ಎಂದು ಸದನದಲ್ಲಿ ಸ್ಪಷ್ಟಪಡಿಸಿದರು.

ರಾಜ್ಯ ಸರ್ಕಾರ ಹಾದಿ ತಪ್ಪಿಲ್ಲ ಹಾಗೂ ತಾವು ಅಸಹಾಯಕ ಮುಖ್ಯಮಂತ್ರಿಯೂ ಅಲ್ಲ. ಎರಡೂವರೆ ವರ್ಷದಲ್ಲಿ ಜನರಿಗೆ ನೀಡಿರುವ ಎಲ್ಲಾ ಭರವಸೆಗಳನ್ನು ಈಡೇರಿಸಲಾಗಿದೆ ಎಂದು ಸಮರ್ಥಿಸಿಕೊಂಡರು.

*****************

ಈ ಬಾರಿಯ ಬಜೆಟ್‌ನಲ್ಲಿ ರಾಜ್ಯದ ರೈಲ್ವೆ ಯೋಜನೆಗಳಿಗೆ ಏಳು ಸಾವಿರದ ೭೪೮ ಕೋಟಿ ರೂಪಾಯಿ ಅನುದಾನ ನೀಡಲಾಗಿದೆ ಎಂದು ಕೇಂದ್ರ ರೈಲ್ವೆ ಸಚಿವ ಅಶ್ವಿನಿ ವೈಷ್ಣವ್ ತಿಳಿಸಿದ್ದಾರೆ.

ರಾಜ್ಯಕ್ಕೆ ಘೋಷಣೆಯಾದ ರೈಲ್ವೆ ಬಜೆಟ್ ಮುಖ್ಯಾಂಶಗಳ ಕುರಿತು ಬೆಂಗಳೂರಿನ ವಿಭಾಗೀಯ ರೈಲ್ವೆ ವ್ಯವಸ್ಥಾಪಕರ ಕಚೇರಿಯಲ್ಲಿ ವಿಡಿಯೋ ಕಾನ್ಫರೆನ್ಸ್ ಮೂಲಕ ಭಾಗವಹಿಸಿ ಮಾತನಾಡಿದ ಅವರು, ಇದು ಈ ಹಿಂದಿನ ಬಜೆಟ್‌ಗಿಂತ ೯ ಪಟ್ಟು ಹೆಚ್ಚಾಗಿದೆ ಎಂದು ಹೇಳಿದ್ದಾರೆ.

ರಾಜ್ಯದಲ್ಲಿ ೨ ಸಾವಿರದ ೧೪ ರಿಂದ ೧ ಸಾವಿರದ ೭೩೫ ಕಿಲೋಮೀಟರ್ ರೈಲ್ವೇಹಳಿಗಳನ್ನು ನಿರ್ಮಿಸಲಾಗುತ್ತಿದ್ದು, ಮೂರು ಸಾವಿರದ ೭೪೨ ಕಿಲೋಮೀಟರ್ ರೈಲ್ವೇ ಹಳಿಗಳನ್ನು ವಿದ್ಯುದ್ದೀಕರಣಗೊಳಿಸಲಾಗಿದೆ ಎಂದು ಸ್ಪಷ್ಟಪಡಿಸಿದ್ದಾರೆ.

ಅಮೃತ್ ರೈಲ್ವೇ ನಿಲ್ದಾಣ ಯೋಜನೆಯಡಿ ೬೧ ನಿಲ್ದಾಣಗಳನ್ನು ಮೇಲ್ದರ್ಜೆಗೇರಿಸಲಾಗಿದ್ದು, ೧ ಸಾವಿರದ ೯೮೧ ಕೋಟಿ ವೆಚ್ಚ ಮಾಡಲಾಗಿದೆ. ೧೨ ವಂದೇ ಭಾರತ್ ರೈಲುಗಳು ಕರ್ನಾಟಕದಲ್ಲಿ ಸಂಚರಿಸುತ್ತಿದ್ದು, ಮೂರು ಅಮೃತ್ ಭಾರತ್ ಎಕ್ಸ್‌ಪ್ರೆಸ್ ರೈಲುಗಳು ಸಂಚರಿಸುತ್ತಿವೆ ಎಂದು ತಿಳಿಸಿದ್ದಾರೆ.

*****************

ಕೇಂದ್ರ ಸರ್ಕಾರವು ಕರ್ನಾಟಕದ ತೆರಿಗೆ ಪಾಲನ್ನು ಶೇಕಡಾ ೪.೧೩೧ ಕ್ಕೆ ಹೆಚ್ಚಿಸಿದೆ ಎಂದು ಕೇಂದ್ರ ಆಹಾರ, ಸಾರ್ವಜನಿಕ ವಿತರಣೆ ಮತ್ತು ಗ್ರಾಹಕ ವ್ಯವಹಾರಗಳ ಖಾತೆ ಸಚಿವ ಪ್ರಲ್ಹಾದ್ ಜೋಶಿ ತಿಳಿಸಿದ್ದಾರೆ.

ನವದೆಹಲಿಯಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ತೆರಿಗೆ ಆದಾಯದ ವಿತರಣೆಯಲ್ಲಿ ರಾಜ್ಯಕ್ಕೆ ಅನ್ಯಾಯವಾಗಿದೆ ಎಂಬ ರಾಜ್ಯ ಕಾಂಗ್ರೆಸ್ ನಾಯಕರ ಆರೋಪಗಳನ್ನು ತಳ್ಳಿಹಾಕಿದ್ದಾರೆ.

೨೦೨೬-೨೭ ಕೇಂದ್ರ ಬಜೆಟ್ ಪ್ರಕಾರ, ರಾಜ್ಯಕ್ಕೆ ೬೩ ಸಾವಿರದ ೪೯ ಕೋಟಿ ರೂಪಾಯಿ ಹಂಚಿಕೆ ಮಾಡಲಾಗಿದೆ. ಹಿಂದಿನ ವರ್ಷಕ್ಕೆ ಹೋಲಿಸಿದರೆ, ಹೆಚ್ಚಿನ ತೆರಿಗೆ ಪಾಲನ್ನು ಪಡೆಯಲಿದೆ ಎಂದು ಸ್ಪಷ್ಟಪಡಿಸಿದ್ದಾರೆ.

*****************

ಕೇಂದ್ರ ಸರ್ಕಾರ ತೆಂಗಿನ ಬೆಳೆಗಾರರು ಗೋಡಂಬಿ, ಕೋಕೋ, ಮೀನುಗಾರಿಕೆ ಮತ್ತು ಶ್ರೀಗಂಧ ಉತ್ಪಾದಕರಿಗೆ ಹೆಚ್ಚಿನ ಪ್ರೋತ್ಸಾಹ ನೀಡಿರುವುದು ಸ್ವಾಗತಾರ್ಹ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ತಿಳಿಸಿದ್ದಾರೆ.

ಶಿವಮೊಗ್ಗದಲ್ಲಿಂದು ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಇದು ರಾಜ್ಯದ ರೈತರಿಗೆ ಸಹಕಾರಿಯಾಗಲಿದೆ ಎಂದು ಹೇಳಿದ್ದಾರೆ.

ಕರ್ನಾಟಕದ ತೆರಿಗೆ ಪಾಲು ಶೇಕಡಾ ೩.೬೫ ರಿಂದ ಶೇಕಡಾ ೪.೧೩ ಕ್ಕೆ ಏರಿಕೆಯಾಗಿದೆ. ಇದರಿಂದ ರಾಜ್ಯಕ್ಕೆ ಪ್ರತಿ ವರ್ಷ ಹೆಚ್ಚುವರಿಯಾಗಿ ೭ ಸಾವಿರದ ೩೮೭ ಕೋಟಿ ರೂಪಾಯಿ ಮತ್ತು ಐದು ವರ್ಷಗಳಲ್ಲಿ ೬೩ ಸಾವಿರದ ೫೦ ಕೋಟಿ ರೂಪಾಯಿ ಆದಾಯ ಬರಲಿದೆ ಎಂದು ಅವರು ಸ್ಪಷ್ಟಪಡಿಸಿದ್ದಾರೆ.

*****************

ಬೆಳಗಾವಿಯ ವಿಶ್ವೇಶ್ವರಯ್ಯ ತಾಂತ್ರಿಕ ವಿಶ್ವವಿದ್ಯಾಲಯದ ೨೫ನೆಯ ಎರಡನೇ ಭಾಗದ ವಾರ್ಷಿಕ ಘಟಿಕೋತ್ಸವ ಇಂದು ವಿಶ್ವವಿದ್ಯಾಲಯದ ಆವರಣದಲ್ಲಿ ಜರುಗಿತು. ರಾಜ್ಯಪಾಲ ಥಾವರ್‌ಚಂದ ಗೆಹ್ಲೋಟ್ ಘಟಿಕೋತ್ಸವಕ್ಕೆ ಚಾಲನೆ ನೀಡಿದರು.

ವಿವಿಧ ಸ್ನಾತಕೋತ್ತರ ಪದವಿಗಳಲ್ಲಿ ರ‍್ಯಾಂಕ್ ವಿಜೇತ ವಿದ್ಯಾರ್ಥಿಗಳಿಗೆ ಚಿನ್ನದ ಪದಗಳನ್ನು  ಹಾಗೂ  ಸಂಶೋಧಕರಿಗೆ ರಾಜ್ಯಪಾಲರು ಪಿಎಚ್.ಡಿ ಪದವಿ ಪ್ರದಾನ ಮಾಡಿದರು.

ಬಳಿಕ ಮಾತನಾಡಿದ ಅವರು, ಸರ್ ಎಂ. ವಿಶ್ವೇಶ್ವರಯ್ಯನವರ ಸಾಧನೆಗಳು  ವಿದ್ಯಾರ್ಥಿಗಳಿಗೆ ಮಾದರಿಗಳಾಬೇಕು. ಕೃತಕ ಬುದ್ಧಿಮತ್ತೆ, ರೋಬೊಟ್ ಜೈವಿಕಶಾಸ್ತ್ರದಂತಹ ನೂತನ ತಂತ್ರಜ್ಞಾನದ ಆವಿಷ್ಕಾರಗಳು ಮಾನವ ಪ್ರಗತಿಗೆ ಹೊಸಮಾರ್ಗ ಸೂಚಿಗಳಾಗಿವೆ ಎಂದು ಅಭಿಪ್ರಾಯ ವ್ಯಕ್ತಪಡಿಸಿದರು.

ಧ್ವನಿ: ರಾಜ್ಯಪಾಲರು ( ೩೪  ಸೆಕೆಂಡ್ಸ್)

ಉನ್ನತ ಶಿಕ್ಷಣ ಸಚಿವ ಡಾ.ಎಂ.ಸಿ. ಸುಧಾಕರ್ ಮಾತನಾಡಿ, ಸರ್ಕಾರಿ ಕಾಲೇಜುಗಳಲ್ಲಿ ಖಾಲಿ ಇರುವ ಎರಡು ಸಾವಿರ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಉದ್ದೇಶಿಸಿದ್ದು, ಶೀಘ್ರದಲ್ಲಿ ಪ್ರಕಟಣೆ ಹೊರಡಿಸಲಾಗುವುದು ಎಂದು ತಿಳಿಸಿದ್ದಾರೆ.

ಘಟಿಕೋತ್ಸವ ಭಾಷಣ ಮಾಡಿದ ನೂತನ ತಂತ್ರಜ್ಞಾನದ ಅಧ್ಯಕ್ಷ ವಿಕ್ರಂ ಮೆನನ್ ರಾಷ್ಟ್ರದ ಪ್ರಗತಿ ಹಾಗೂ ಭದ್ರತೆ ಪೂರಕವಾಗಿವೆ ಎಂದು ಹೇಳಿದ್ದಾರೆ.

*****************

ಸಮಸ್ಯೆ ಮತ್ತು ಜೀವನಶೈಲಿ ಚಿತ್ರಿಸುವಲ್ಲಿ ಓಟಿಟಿ ಮಹತ್ವದ ಪಾತ್ರ ವಹಿಸುತ್ತಿದೆ ಎಂದು ಪದ್ಮಶ್ರೀ ಪುರಸ್ಕೃತ ಡಾ.ಗಿರೀಶ್ ಕಾಸರವಳ್ಳಿ ಅಭಿಪ್ರಾಯಪಟ್ಟಿದ್ದಾರೆ.

೧೭ನೇ ಬೆಂಗಳೂರು ಅಂತಾರಾಷ್ಟ್ರೀಯ ಚಲನಚಿತ್ರೋತ್ಸವದ ಸಂವಾದದಲ್ಲಿ ಭಾಗವಹಿಸಿ ಮಾತನಾಡಿದ ಅವರು, ೩೦ ವರ್ಷಗಳ ಹಿಂದೆ ಟೆಲಿವಿಷನ್ ಬೆಳವಣಿಗೆಯಿಂದ ಉಂಟಾದ ಒಳ್ಳೆಯ ಸಂಗತಿಯೆಂದರೆ, ಒಬ್ಬ ನಟಿ ಸ್ಟಾರ್ ಆಗಬೇಕಾದರೆ ಆಕೆ ಎಷ್ಟೇ ಪ್ರತಿಭಾವಂತಳಾಗಿದ್ದರೂ, ಸುಂದರವಾಗಿರಬೇಕು ಎಂಬ ನಂಬಿಕೆ ಇತ್ತು. ಪ್ರತಿಭೆ ಎರಡನೇ ಸ್ಥಾನದಲ್ಲಿತ್ತು. ಆದರೆ, ಟಿವಿ ಮಾಧ್ಯಮ ಬಂದ ಮೇಲೆ ಪ್ರತಿಭೆ ಇರುವವರನ್ನು ನೇರವಾಗಿ ಸಾಮಾನ್ಯ ಜನರ ಮಧ್ಯದಿಂದಲೇ ಆಯ್ಕೆ ಮಾಡಲು ಆರಂಭಿಸಲಾಯಿತು ಎಂದು ಹೇಳಿದರು.

ಇಂದಿನ ದಿನಗಳಲ್ಲಿ ವೆಬ್ ಸೀರೀಸ್‌ಗಳು ಬಹಳ ಪರಿಣಾಮಕಾರಿಯಾಗಿ ಕಾರ್ಯ ನಿರ್ವಹಿಸುತ್ತಿವೆ. ಆ ನಿಟ್ಟಿನಲ್ಲಿ ನಾವು ಓಟಿಟಿಯೊಂದಿಗೆ ಹೆಜ್ಜೆ ಹಾಕಬೇಕು ಎಂದು ಪ್ರತಿಪಾದಿಸಿದರು.

*****************

ಬೆಂಗಳೂರಿನ ನಿಮ್ಹಾನ್ಸ್‌ನ ಮಾನಸಿಕ ಆರೋಗ್ಯ ಶಿಕ್ಷಣ ವಿಭಾಗವು ಮನೋವೈದ್ಯಕೀಯ ಸಾಮಾಜ ಕಾರ್ಯ ವಿಭಾಗದ ಸಹಯೋಗದೊಂದಿಗೆ ಕೈಗೊಂಡಿರುವ 'ಪುರುಷರ ಸ್ವಾಸ್ಥ್ಯ ಕಾರ್ಯಕ್ರಮ' ವನ್ನು ಇದೇ ೨೦ ಮತ್ತು ೨೧ ರಂದು ಸಂಸ್ಥೆಯ ಆವರಣದಲ್ಲಿ ನಡೆಸಲಿದೆ.

ಎರಡು ದಿನಗಳ ಕಾಲ ನಡೆಯುವ ಈ ಕಾರ್ಯಕ್ರಮದ ನೋಂದಣಿ ಈಗ ತೆರೆದಿದ್ದು, ಪಾಲ್ಗೊಳ್ಳಲು ಸೀಮಿತ ಅವಕಾಶಗಳಿದ್ದು, ಮೊದಲು ಬಂದವರಿಗೆ ಮೊದಲ ಆದ್ಯತೆ ನೀಡಲಾಗುತ್ತಿದೆ. ಹೆಚ್ಚಿನ ವಿವರಗಳಿಗಾಗಿ, ಭಾಗವಹಿಸುವವರು ಮಾನಸಿಕ ಆರೋಗ್ಯ ಶಿಕ್ಷಣ ವಿಭಾಗ, ನಿಮ್ಹಾನ್ಸ್, ಅನ್ನು education.health@gmail.com ನಲ್ಲಿ ಸಂಪರ್ಕಿಸಬಹುದು ಅಥವಾ ೦೮೦ ೨೬೯೯೫೧೫೬ ಗೆ ಕರೆ ಮಾಡಬಹುದು ಎಂದು ತಿಳಿಸಿದೆ.

*****************

ರಾಷ್ಟ್ರಪಿತ ಮಹಾತ್ಮ ಗಾಂಧೀಜಿ ಅವರ ಆಶಯದಂತೆ ಗ್ರಾಮಗಳ ಅಭಿವೃದ್ಧಿಯಿಂದ ದೇಶದ ಅಭಿವೃದ್ಧಿ ಸಾಧ್ಯವಾಗಲಿದೆ ಎಂದು ಆಹಾರ ಹಾಗೂ ಬೆಂಗಳೂರು ಗ್ರಾಮಾಂತರ ಜಿಲ್ಲಾ ಉಸ್ತುವಾರಿ ಸಚಿವ ಕೆ.ಎಚ್.ಮುನಿಯಪ್ಪ ತಿಳಿಸಿದ್ದಾರೆ.

*********ಮುಕ್ತಾಯ*******